ಪಿ.ಡಬ್ಲ್ಯೂ.1. ಅಸಲು ದಾವಾ ಸಂಖ್ಯೆ.146/2020

**ದಿನಾಂಕಃ- 06.09.2021 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

<u>ಮುಖ್ಯ ವಿಚಾರಣೆ ವಾದಿಗಳ ಪರ ವಕೀಲರಾದ ಶ್ರೀ. ಕೆಜಿಎನ್ ರವರಿಂದ</u>

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣ ಪತ್ರ ವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯ ಸಂಗತಿಗಳಾಗಿರುತ್ತವೆ.

1. ಸ್ವತ್ತಿನ ಸಂಖ್ಯೆ 41 ಕ್ಕೆ ಸಂಬಂಧಿಸಿದಂತೆ ನಮೂನೆ-11 ರ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.1 ಎಂದು ಗುರುತಿಸಲಾಯಿತು.

2. ಖಾತಾ ನಂ.140 ಕ್ಕೆ ಸಂಬಂಧಿಸಿದಂತೆ ದಿನಾಂಕಃ-01.04.2004 ರಿಂದ 10.09.2014 ರವರೆಗಿನ ನಮೂನೆ-16 ರ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.2 ಎಂದು ಗುರುತಿಸಲಾಯಿತು.

3. ಖಾತಾ ನಂ.140 ಕ್ಕೆ ಸಂಬಂಧಿಸಿದಂತೆ ದಿನಾಂಕಃ-01.04.1960 ರಿಂದ 31.03.2004 ರವರೆಗಿನ ನಮೂನೆ-16 ರ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.3 ಎಂದು ಗುರುತಿಸಲಾಯಿತು.

4. ಖಾತಾ ನಂ.191 ಕ್ಕೆ ಸಂಬಂಧಿಸಿದಂತೆ ನಮೂನೆ-11 ರ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.4 ಎಂದು ಗುರುತಿಸಲಾಯಿತು.

5. ಖಾತಾ ನಂ.191 ಕ್ಕೆ ಸಂಬಂಧಿಸಿದಂತೆ ದಿನಾಂಕಃ-01.04.1960 ರಿಂದ 31.03.2004 ರವರೆಗಿನ ನಮೂನೆ-16 ರ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.5 ಎಂದು ಗುರುತಿಸಲಾಯಿತು.

6. ಖಾತಾ ನಂ.191 ಕ್ಕೆ ಸಂಬಂಧಿಸಿದಂತೆ ದಿನಾಂಕಃ-01.04.2004 ರಿಂದ 10.09.2014 ರವರೆಗಿನ ನಮೂನೆ-16 ರ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.6 ಎಂದು ಗುರುತಿಸಲಾಯಿತು.

ಆದ್ದರಿಂದ ಈ ದಾವೆಯಲ್ಲಿ ಕೋರಿರುವಂತೆ ಪ್ರತಿವಾದಿಯ ವಿರುದ್ಧ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಪ್ರಾರ್ಥನೆ.

ಮುಂದುವರಿದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಆಲಿಸಿ ನೀಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿ

ಪೂರ್ಣಪ್ರಭಾರ ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ಗುಬ್ಬಿ